All India Radio: Bangalore
National Bulletin In Kannada
02.05.2025 7.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
02.05.2025 7.35 a.m.
<><><><>

ಮುಖ್ಯಾಂಶಗಳು

- ಕೇರಳದಲ್ಲಿಂದು ಮೊದಲ ಅರೆ ಸ್ವಯಂಚಾಲಿತ ವಿಳಿಂಜಂ ಅಂತಾರಾಷ್ಟ್ರೀಯ ಬಂದರು ರಾಷ್ಟ್ರಕ್ಕೆ ಸಮರ್ಪಿಸಲಿರುವ ಪ್ರಧಾನಿ ನರೇಂದ್ರ ಮೋದಿ
- ಏಪ್ರಿಲ್‌ನಲ್ಲಿ ದಾಖಲೆಯ ಜಿಎಸ್‌ಟಿ ಸಂಗ್ರಹ ; ದೇಶದ ಆರ್ಥಿಕತೆಯ ಸ್ಥಿತಿಸ್ಥಾಪಕತ್ವದ ಸಂಕೇತ - ಸಚಿವೆ ನಿರ್ಮಲಾ ಸೀತಾರಾಮನ್
- ವೇವ್ಸ್ ಶೃಂಗಸಭೆಯ ಭಾಗವಾಗಿ ಮೊದಲ ಬಾರಿಗೆ ಜಾಗತಿಕ ಮಾಧ್ಯಮ ಸಂವಾದ ಆಯೋಜನೆ
- ವೈದ್ಯರು ಜನರಿಕ್ ಔಷಧಿಗಳನ್ನು ಮಾತ್ರ ಸೂಚಿಸಬೇಕೇ ಹೊರತು ನಿರ್ದಿಷ್ಟ ಬ್ರ್ಯಾಂಡ್‌ಗಳನ್ನು ಶಿಫಾರಸು ಮಾಡುವಂತಿಲ್ಲ - ಸುಪ್ರೀಂ ಕೋರ್ಟ್
- ಐಪಿಎಲ್ ಟಿ-೨೦ ಕ್ರಿಕೆಟ್ ; ರಾಜಸ್ಥಾನ್ ರಾಯಲ್ಸ್ ವಿರುದ್ಧ ಮುಂಬೈ ಇಂಡಿಯನ್ಸ್‌ಗೆ ೧೦೦ ರನ್‌ಗಳ ಭರ್ಜರಿ ಗೆಲುವು

<><><><>

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಬೆಳಿಗ್ಗೆ ಕೇರಳದ ತಿರುವನಂತಪುರದಲ್ಲಿ ಭಾರತದ ಮೊದಲ ಅರೆ ಸ್ವಯಂಚಾಲಿತ ಬಂದರಾದ ವಿಳಿಂಜಂ ಅಂತಾರಾಷ್ಟ್ರೀಯ ಬಂದರನ್ನು ರಾಷ್ಟ್ರಕ್ಕೆ ಅರ್ಪಿಸಲಿದ್ದಾರೆ. ಅಲ್ಲದೆ, ಅವರು ಬಂದರಿನ ಕಾರ್ಯಾಚರಣೆ ಕಟ್ಟಡಕ್ಕೂ ಭೇಟಿ ನೀಡಿ ನಿಯಂತ್ರಣ ವ್ಯವಸ್ಥೆಗಳನ್ನು ಪರಿಶೀಲಿಸಲಿದ್ದಾರೆ. ವಿಳಿಂಜಂ ಬಂದರಿನ ಮೊದಲ ಹಂತದ ನಿರ್ಮಾಣದ ಪ್ರಮುಖ ಭಾಗವು ಡಿಸೆಂಬರ್ ೨೦೨೪ ರಲ್ಲಿ ಪೂರ್ಣಗೊಂಡಿತು. ಕೇರಳದ ಕನಸಿನ ಯೋಜನೆಯಾಗಿರುವ ವಿಳಿಂಜಂ ಬಂದರು ಸುಮಾರು ಮೂರು ದಶಕಗಳ ದೀರ್ಘ ವಿಳಂಬದ ನಂತರ ಅಂತಿಮವಾಗಿ ವಾಸ್ತವವಾಗುತ್ತಿದೆ. ಸಮಾರಂಭದಲ್ಲಿ ಕೇರಳ ರಾಜ್ಯಪಾಲ ರಾಜೇಂದ್ರ ಅರ್ಲೇಕರ್, ಮುಖ್ಯಮಂತ್ರಿ ಪಿಣರಾಯಿ ವಿಜಯನ್, ಕೇಂದ್ರ ಬಂದರು, ಹಡಗು ಮತ್ತು ಜಲಮಾರ್ಗಗಳ ಸಚಿವ ಸರ್ಬಾನಂದ ಸೋನೋವಾಲ್, ರಾಜ್ಯ ಖಾತೆ ಸಚಿವರು ಮತ್ತು ಇತರ ಉನ್ನತ ಅಧಿಕಾರಿಗಳು ಭಾಗವಹಿಸಲಿದ್ದಾರೆ.

<><><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದು ಸಂಜೆ ಆಂಧ್ರಪ್ರದೇಶದ ಅಮರಾವತಿಯಲ್ಲಿ ಸುಮಾರು ೫೮,೦೦೦ ಕೋಟಿ ರೂಪಾಯಿಗಳಿಗೂ ಅಧಿಕ ಮೌಲ್ಯದ ಹಲವು ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಿ, ಶಿಲಾನ್ಯಾಸ ನೆರವೇರಿಸಿ, ರಾಷ್ಟ್ರಕ್ಕೆ ಸಮರ್ಪಿಸಲಿದ್ದಾರೆ.

ಆಂಧ್ರಪ್ರದೇಶದ ಹಸಿರು ವಲಯದ ರಾಜಧಾನಿ ಅಮರಾವತಿಯಲ್ಲಿ ಪ್ರಧಾನಮಂತ್ರಿ ಪ್ರಮುಖ ಬಂಡವಾಳ ಸೌಲಭ್ಯಗಳ ನಿರ್ಮಾಣಕ್ಕೂ ಚಾಲನೆ ನೀಡಲಿದ್ದಾರೆ. ದೇಶಾದ್ಯಂತ ವಿಶ್ವದರ್ಜೆಯ ಮೂಲಸೌಕರ್ಯ ಮತ್ತು ಸಂಪರ್ಕ ಖಾತ್ರಿಪಡಿಸಿಕೊಳ್ಳುವ ಸರ್ಕಾರದ ಬದ್ಧತೆಗೆ ಅನುಗುಣವಾಗಿ, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಆಂಧ್ರಪ್ರದೇಶದಲ್ಲಿ ೭ ರಾಷ್ಟ್ರೀಯ ಹೆದ್ದಾರಿ ಯೋಜನೆಗಳನ್ನು ಉದ್ಘಾಟಿಸಲಿದ್ದಾರೆ ಮತ್ತು ೬ ರಾಷ್ಟ್ರೀಯ ಹೆದ್ದಾರಿ ಯೋಜನೆಗಳು ಮತ್ತು ಒಂದು ರೈಲ್ವೆ ಯೋಜನೆಗೆ ಶಿಲಾನ್ಯಾಸ ನೆರವೇರಿಸಲಿದ್ದಾರೆ. ಆಂಧ್ರಪ್ರದೇಶದ ರಾಜಧಾನಿ ಅಮರಾವತಿಯಲ್ಲಿ ೧೧,೨೪೦ ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ಶಾಸಕಾಂಗ ಸಭೆ, ಹೈಕೋರ್ಟ್, ಸಚಿವಾಲಯ ಮತ್ತು ಇತರ ಆಡಳಿತ ಕಟ್ಟಡಗಳಿಗೆ ಶಿಲಾನ್ಯಾಸ ನೆರವೇರಿಸಲಿದ್ದಾರೆ.

<><><>

ಏಪ್ರಿಲ್‌ನಲ್ಲಿ ದಾಖಲೆಯ ಜಿಎಸ್‌ಟಿ ಸಂಗ್ರಹವು ಭಾರತೀಯ ಆರ್ಥಿಕತೆಯ ಸ್ಥಿತಿಸ್ಥಾಪಕತ್ವ ಮತ್ತು ಸಹಕಾರಿ ಒಕ್ಕೂಟದ ಪರಿಣಾಮಕಾರಿವನ್ನು ಪ್ರದರ್ಶಿಸುತ್ತದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ಏಪ್ರಿಲ್‌ನಲ್ಲಿ ಒಟ್ಟು ಜಿಎಸ್‌ಟಿ ಸಂಗ್ರಹವು ೨.೩೬ ಲಕ್ಷ ಕೋಟಿ ರೂಪಾಯಿಗಳಾಗಿದ್ದು, ಏಪ್ರಿಲ್ ೨೦೨೪ ರಲ್ಲಿ ಒಟ್ಟು ಸಂಗ್ರಹವಾಗಿದ್ದ ೨.೧೦ ಲಕ್ಷ ಕೋಟಿ ರೂಪಾಯಿಗಳಿಗಿಂತ ಶೇ. ೧೨.೬ ರಷ್ಟು ಹೆಚ್ಚಳವಾಗಿದೆ. ಏಪ್ರಿಲ್ ೨೦೨೫ರ ನಿವ್ವಳ ಜಿಎಸ್‌ಟಿ ಸಂಗ್ರಹವು ೨.೦೯ ಲಕ್ಷ ಕೋಟಿ ರೂಪಾಯಿ ತಲುಪಿದ್ದು, ಏಪ್ರಿಲ್೨೦೨೪ರಲ್ಲಿ ನಿವ್ವಳ ಸಂಗ್ರಹವಾಗಿದ್ದ ೧.೯೨ ಲಕ್ಷ ಕೋಟಿ ರೂಪಾಯಿಗಳಿಗೆ ಹೋಲಿಸಿದರೆ ಶೇ. ೯.೧ ರಷ್ಟು ಬೆಳವಣಿಗೆ ಸಾಧಿಸಿದೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಸೀತಾರಾಮನ್, ಜಿಎಸ್‌ಟಿಯ ಮೇಲೆ ತೆರಿಗೆದಾರರ ನಂಬಿಕೆಯು ರಾಷ್ಟ್ರದ ಪ್ರಗತಿಗೆ ಪೂರಕವಾಗಿದೆ ಎಂದು ಅವರಿಗೆ ಕೃತಜ್ಞತೆಗಳನ್ನು ಸಲ್ಲಿಸಿದರು.ಈ ಕೊಡುಗೆಗಳು ವಿಕಸಿತ ಭಾರತವನ್ನು ನಿರ್ಮಿಸಲು ಹಂಚಿಕೆಯ ಬದ್ಧತೆಯನ್ನು ಪ್ರತಿಬಿಂಬಿಸುತ್ತವೆ ಎಂದು ಅವರು ಹೇಳಿದರು. ಭಾರತದ ಜಿಎಸ್‌ಟಿ ಚೌಕಟ್ಟಿನಲ್ಲಿ ಸಮಾನ ಪಾಲುದಾರರಾಗಿ ಉಳಿದಿರುವ ಎಲ್ಲಾ ರಾಜ್ಯಗಳ ಹಣಕಾಸು ಮಂತ್ರಿಗಳು ಮತ್ತು ರಾಜ್ಯ ಜಿಎಸ್‌ಟಿ ಅಧಿಕಾರಿಗಳ ಬದ್ಧತೆಯ ಪ್ರಯತ್ನಗಳನ್ನು ಶ್ಲಾಘಿಸಿದರು.

<><><>

ಭಾರತವು ಮುಂಬೈನ ಜಿಯೋ ವರ್ಲ್ಡ್ ಸಮಾವೇಶ ಕೇಂದ್ರದಲ್ಲಿ ಇಂದು ವೇವ್ಸ್ ಶೃಂಗಸಭೆಯ ಭಾಗವಾಗಿ ಮೊದಲ ಬಾರಿಗೆ ಜಾಗತಿಕ ಮಾಧ್ಯಮ ಸಂವಾದ ಆಯೋಜಿಸಲು ಸಜ್ಜಾಗಿದೆ. ಜಾಗತಿಕ ಮಾಧ್ಯಮ ಮತ್ತು ಮನರಂಜನಾ ವಲಯದಲ್ಲಿ ದೇಶವನ್ನು ತೊಡಗಿಸಿಕೊಳ್ಳುವಿಕೆಯಲ್ಲಿ ಈ ಕಾರ್ಯಕ್ರಮವು ಮಹತ್ವದ ಮೈಲಿಗಲ್ಲು ಎಂದು ಗುರುತಿಸಲಾಗಿದೆ. ನಿನ್ನೆ ಆರಂಭವಾದ ನಾಲ್ಕು ದಿನಗಳ ಶೃಂಗಸಭೆಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ ನೀಡಿದರು.

ಜಾಗತಿಕ ಮಾಧ್ಯಮ ಸಂವಾದವನ್ನು ವಿದೇಶಾಂಗ ಸಚಿವಾಲಯದ ನೆರವಿನೊಂದಿಗೆ ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯ ಆಯೋಜಿಸುತ್ತಿದೆ. ಏಷ್ಯಾ, ಯುರೋಪ್, ಆಫ್ರಿಕಾ ಮತ್ತು ಅಮೆರಿಕಾಗಳಾದ್ಯಂತದ ನಿಯೋಗಗಳೊಂದಿಗೆ ೬೦ ಕ್ಕೂ ಅಧಿಕ ದೇಶಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸುವ ನಿರೀಕ್ಷೆಯಿದೆ.

ಅಂತಾರಾಷ್ಟ್ರೀಯ ಸಹಯೋಗವನ್ನು ಪ್ರೋತ್ಸಾಹಿಸುವುದು, ಉತ್ತಮ ಅಭ್ಯಾಸಗಳನ್ನು ಉತ್ತೇಜಿಸುವುದು ಮತ್ತು ಜಾಗತಿಕ ಮಾಧ್ಯಮ ಕ್ಷೇತ್ರದಲ್ಲಿ ನೀತಿ ಜೋಡಣೆ, ಪ್ರತಿಭಾ ವಿನಿಮಯ ಮತ್ತು ಸಾಮರ್ಥ್ಯ ವೃದ್ಧಿಗೆ ಮಾರ್ಗಗಳನ್ನು ಅನ್ವೇಷಿಸುವುದು ಈ ಸಂವಾದದ ಗುರಿಯಾಗಿದೆ.

<><><>

ಮನರಂಜನಾ ಉದ್ಯಮವನ್ನು ಇನ್ನಷ್ಟು ಬಲಪಡಿಸುವ ಸಾಮರ್ಥ್ಯವಿರುವ ವೇವ್ಸ್ ಶೃಂಗಸಭೆಯನ್ನು ರೂಪಿಸಿ, ಆಯೋಜಿಸಿದ್ದಕ್ಕಾಗಿ, ನಟ ಮತ್ತು ಚಲನಚಿತ್ರ ನಿರ್ಮಾಪಕ ಶಾರುಖ್ ಖಾನ್, ಪ್ರಧಾನಿ ನರೇಂದ್ರ ಮೋದಿ ಅವರಿಗೆ ಚಿತ್ರರಂಗದ ಪರವಾಗಿ ಕೃತಜ್ಞತೆ ಸಲ್ಲಿಸಿದ್ದಾರೆ. ಈ ವೇದಿಕೆಯು ಉದ್ಯಮಕ್ಕೆ ಎಷ್ಟು ಸೂಕ್ತವಾಗಿದೆ ಮತ್ತು ಸರ್ಕಾರದಿಂದ ವಿವಿಧ ಕ್ಷೇತ್ರಗಳಲ್ಲಿ ಅಗತ್ಯವಾದ ಸಹಕಾರ ಹಾಗೂ ಬೆಂಬಲವನ್ನು ಒದಗಿಸುತ್ತದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ. ಭಾರತವು ಚಲನಚಿತ್ರ ಚಿತ್ರೀಕರಣಕ್ಕೆ ಒಂದು ಬೃಹತ್ ಅವಕಾಶಗಳ ತಾಣವಾಗಿರುವುದನ್ನು ಕುರಿತು ಮಾತನಾಡಿದ ಖಾನ್, ಅಂತಾರಾಷ್ಟ್ರೀಯ ಚಲನಚಿತ್ರ ನಿರ್ಮಾಪಕರು 'ಶೂಟ್ ಇನ್ ಇಂಡಿಯಾ'ವನ್ನು ತಮ್ಮ ಮುಂದಿನ ನೆಚ್ಚಿನ ತಾಣವಾಗಿ ಪರಿಗಣಿಸಬಹುದು ಎಂದು ಹೇಳಿದರು. ಅಲ್ಲದೆ, ಅಂತಾರಾಷ್ಟ್ರೀಯ ಚಲನಚಿತ್ರ ಸಂಸ್ಥೆಗಳು ಮತ್ತು ಉದ್ಯಮಗಳೊಂದಿಗೆ ಮಾಡಿಕೊಳ್ಳುವ ವಿವಿಧ ಸ್ವರೂಪದ ಒಪ್ಪಂದಗಳು ಭಾರತದ ಮನರಂಜನಾ ವಲಯವನ್ನು ರೂಪಿಸುವಲ್ಲಿ ಮತ್ತು ಬಲಪಡಿಸುವಲ್ಲಿ ದೂರಗಾಮಿ ಪರಿಣಾಮ ಬೀರಬಲ್ಲವು ಎಂಬುದನ್ನು ಅವರು ಬಲವಾಗಿ ಪ್ರತಿಪಾದಿಸಿದರು. ಎರಡನೇ ಮತ್ತು ಮೂರನೇ ಹಂತದ ನಗರಗಳ ಪ್ರೇಕ್ಷಕರಿಗೆ ಭಾರತೀಯ ಸಿನೆಮಾ ಇನ್ನಷ್ಟು ಕೈಗೆಟುಕುವ ದರದಲ್ಲಿ ಸಿಗುವಂತೆ ಮಾಡುವ ಮಹತ್ವವನ್ನು ಖಾನ್ ಅವರು ಒತ್ತಿ ಹೇಳಿದರು.

<><><>

ರಾಜಸ್ಥಾನದಲ್ಲಿ ಆದೇಶಿಸಿರುವಂತೆ ವೈದ್ಯರು ಕೇವಲ ಜನರಿಕ್ ಔಷಧಿಗಳನ್ನು ಮಾತ್ರ ಸೂಚಿಸಬೇಕೇ ಹೊರತು ಯಾವುದೇ ನಿರ್ದಿಷ್ಟ ಬ್ರಾಂಡ್‌ನ ಔಷಧಿಗಳನ್ನು ಮಾತ್ರ ಶಿಫಾರಸು ಮಾಡಬಾರದು ಸುಪ್ರೀಂ ಕೋರ್ಟ್ ಹೇಳಿದೆ.

ಔಷಧ ಕಂಪನಿಗಳ ಅನೈತಿಕ ಮಾರುಕಟ್ಟೆ ಪದ್ಧತಿಗಳನ್ನು ನಿಯಂತ್ರಿಸಲು ಕೋರಿ ಸಲ್ಲಿಸಲಾದ ಅರ್ಜಿ ಆಲಿಸಿದ ಸುಪ್ರೀಂಕೋರ್ಟ್, ಈ ನಿರ್ದೇಶನವನ್ನು ದೇಶಾದ್ಯಂತ ಜಾರಿಗೆ ತಂದರೆ, ಅದು ದೊಡ್ಡ ಬದಲಾವಣೆಗೆ ನಾಂದಿ ಹಾಡುತ್ತದೆ ಎಂದು ಹೇಳಿದೆ. ಸುಪ್ರೀಂಕೋರ್ಟ್‌ನ ನ್ಯಾಯಮೂರ್ತಿಗಳಾದ ಸಂದೀಪ್ ಮೆಹ್ತಾ, ವಿಕ್ರಮ್ ನಾಥ್ ಮತ್ತು ಸಂಜಯ್ ಕರೋಲ್ ಅವರನ್ನು ಒಳಗೊಂಡ ತ್ರಿಸದಸ್ಯಪೀಠವು ಈ ಆದೇಶ ನೀಡಿದೆ. ವೈದ್ಯರು ಜೆನೆರಿಕ್ ಔಷಧಿಗಳನ್ನು ಶಿಫಾರಸು ಮಾಡಲು ಶಾಸನಬದ್ಧ ಆದೇಶವಿದ್ದರೆ, ವೈದ್ಯರಿಗೆ ಲಂಚ ನೀಡುತ್ತಿದ್ದಾರೆನ್ನಲಾದ ಔಷಧ ಕಂಪನಿಗಳ ಸಮಸ್ಯೆ ಪರಿಹರಿಸಲಾಗುತ್ತದೆ ಎಂದು ಸುಪ್ರೀಂಕೋರ್ಟ್ ಹೇಳಿದೆ. ರಾಜಸ್ಥಾನದಲ್ಲಿ, ಪ್ರತಿಯೊಬ್ಬ ವೈದ್ಯಕೀಯ ವೃತ್ತಿಪರರು ಜೆನೆರಿಕ್ ಔಷಧವನ್ನು ಶಿಫಾರಸು ಮಾಡಬೇಕು ಎಂಬ ಕಾರ್ಯನಿರ್ವಾಹಕ ಸೂಚನೆ ಈಗ ಇದೆ. ಅವರು ಯಾವುದೇ ಕಂಪನಿಯ ಔಷಧ ಶಿಫಾರಸು ಮಾಡುವಂತಿಲ್ಲ ಎಂದು ಸ್ಪಷ್ಟಪಡಿಸಿದೆ.

<><><>

ಕಿಸಾನ್ ಮಜ್ದೂರ್ ಮೋರ್ಚಾ ಮತ್ತು ಸಂಯುಕ್ತ ಕಿಸಾನ್ ಮೋರ್ಚಾ ಸಂಘಟನೆಗಳು ಕೇಂದ್ರ ಕೃಷಿ ಸಚಿವರಿಗೆ ಪತ್ರ ಬರೆದು ಮಾತುಕತೆಯಿಂದ ಪಂಜಾಬ್ ಸರ್ಕಾರವನ್ನು ಹೊರಗಿಡುವಂತೆ ಮನವಿ ಮಾಡಿದ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ಇದೇ ೪ ರಂದು ರೈತ ಸಂಘಟನೆಗಳೊಂದಿಗೆ ನಡೆಸಲು ಉದ್ದೇಶಿಸಿದ್ದ ಸಭೆಯನ್ನು ರದ್ದುಗೊಳಿಸಿದೆ. ಈ ಕುರಿತು ಕೇಂದ್ರ ಕೃಷಿ ಸಚಿವಾಲಯ ೨ ಸಂಘಟನೆಗಳಿಗೆ ಪತ್ರ ಬರೆದು ಸಂಘಟನೆಗಳು ತಮ್ಮ ನಿಲುವನ್ನು ಮರುಪರಿಶೀಲಿಸುವಂತೆ ಸೂಚಿಸಿದೆ.

<><><><>

ನಿನ್ನೆ ರಾತ್ರಿ ಜೈಪುರದ ಸವಾಯ್ ಮಾನ್ಸಿಂಗ್ ಕ್ರೀಡಾಂಗಣದಲ್ಲಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯಲ್ಲಿ ಮುಂಬೈ ಇಂಡಿಯನ್ಸ್ ತಂಡವು ೧೦೦ ರನ್‌ಗಳಿಂದ ಗೆಲುವು ಸಾಧಿಸಿದೆ. ಮುಂಬೈ ಇಂಡಿಯನ್ಸ್ ತಂಡವು ನೀಡಿದ್ದ ೨೧೮ ರನ್‌ಗಳ ಗುರಿಯನ್ನು ಬೆನ್ನಟ್ಟಿದ ರಾಜಸ್ಥಾನ್ ರಾಯಲ್ಸ್ ತಂಡ ೧೬.೧ ಓವರ್‌ಗಳಲ್ಲಿ ಕೇವಲ ೧೧೭ ರನ್‌ಗಳಿಗೆ ಆಲೌಟ್ ಆಗಿ ಸೋಲುಂಡಿತು. ಇಂದು ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಗುಜರಾತ್ ಟೈಟನ್ಸ್ ಮತ್ತು ಸನ್‌ರೈಸರ್ಸ್ ಹೈದರಾಬಾದ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಸಂಜೆ ೭:೩೦ ಕ್ಕೆ ಆರಂಭವಾಗಲಿದೆ.

<><><><>

ನವದೆಹಲಿಯಲ್ಲಿ ಬ್ಯಾಡ್ಮಿಂಟನ್ ಚಾಂಪಿಯನ್‌ಗಳಾದ ಚಿರಾಗ್ ಶೆಟ್ಟಿ ಮತ್ತು ಸಾತ್ವಿಕ್‌ಸಾಯಿರಾಜ್ ರಾಂಕಿರೆಡ್ಡಿ ಅವರಿಗೆ ಯುವಜನ ವ್ಯವಹಾರ ಮತ್ತು ಕ್ರೀಡಾ ಸಚಿವ ಡಾ. ಮನ್ಸುಖ್ ಮಾಂಡವಿಯಾ ಅವರು ೨೦೨೩ನೇ ಸಾಲಿನ ಮೇಜರ್ ಧ್ಯಾನ್ ಚಂದ್ ಖೇಲ್ ರತ್ನ ಪ್ರಶಸ್ತಿಯನ್ನು ಪ್ರದಾನ ಮಾಡಿದರು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>